## ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:** 240.

**ಸದಸ್ಯರ ಹೆಸರು:** ಶ್ರೀ ಎನ್. ರವಿಕುಮಾರ್.

(ವಿಧಾನ ಸಭೆಯಿಂದ ಚುನಾಯಿತರಾದವರು)

**ಉತ್ತರಿಸಬೇಕಾದ ದಿನಾಂಕ:** 10.12.2020.

**ಉತ್ತರಿಸುವ ಸಚಿವರು:** ಮಾನ್ಯ ಮುಖ್ಯ ಮಂತ್ರಿಗಳು.

| ಉಪ ಪ್ರಶ್ನೆ | ಉತ್ತರ |
|---|---|
| **ಅ)** ಐ.ಎಂ.ಎ ಹಗರಣದಲ್ಲಿ ಇದುವರೆಗೆ ಎಷ್ಟು ಐ.ಎ.ಎಸ್ ಮತ್ತು ಐ.ಪಿ.ಎಸ್ ಅಧಿಕಾರಿಗಳ ವಿರುದ್ಧ ಪ್ರಕರಣ ದಾಖಲಾಗಿದೆ; | ಐ.ಎ.ಎಸ್ – 01.<br><br>ಐ.ಪಿ.ಎಸ್ – 02. |
| **ಆ)** ಕ್ರಿಮಿನಲ್ ಮೊಕದ್ದಮೆ ದಾಖಲಾದ ಐ.ಎ.ಎಸ್ ಮತ್ತು ಐ.ಪಿ.ಎಸ್ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕೈಗೊಳ್ಳುವ ಕ್ರಮಗಳೇನು; ಸದರಿ ಅಧಿಕಾರಿಗಳನ್ನು ಅಮಾನತ್ತುಗೊಳಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಯಾವ ನಿಯಮದ ಅನ್ವಯ ಸದರಿ ಅಧಿಕಾರಿಗಳಿಗೆ ಕರ್ತವ್ಯ ನಿರ್ವಹಿಸಲು ಅನುಮತಿ ನೀಡಲಾಗಿದೆ; | ಪ್ರಕರಣದ ವಿಚಾರಣೆಯನ್ನು ಸಿ.ಬಿ.ಐ ಸಂಸ್ಥೆಗೆ ವಹಿಸಿದ್ದು, ಈ ಪ್ರಕರಣದಲ್ಲಿ ಆರೋಪಿತರಾಗಿರುವ ಅಧಿಕಾರಿಗಳ ವಿರುದ್ಧ ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ, 1988ರ ಕಲಂ 17A(1)(b)ರನ್ವಯ ತನಿಖೆ/ವಿಚಾರಣೆ ನಡೆಸಲು ಸಿ.ಬಿ.ಐ ಸಂಸ್ಥೆಗೆ ಅನುಮತಿ ನೀಡಲಾಗಿತ್ತು. ಈ ಪ್ರಕರಣದಲ್ಲಿ ಆರೋಪಿತ ಐ.ಎ.ಎಸ್ ಅಧಿಕಾರಿಯು ನಿಧನ ಹೊಂದಿರುತ್ತಾರೆ. ಐ.ಪಿ.ಎಸ್ ಅಧಿಕಾರಿಗಳನ್ನು ಅಭಿಯೋಜನೆಗೊಳಪಡಿಸಲು ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ, 1988ರ ಕಲಂ 19ರಡಿಯಲ್ಲಿ ಸಿ.ಬಿ.ಐ ಸಂಸ್ಥೆಗೆ ಅಭಿಯೋಜನಾ ಮಂಜೂರಾತಿ ನೀಡಲಾಗಿದೆ.<br><br>ಐ.ಎ.ಎಸ್ ಅಧಿಕಾರಿಯನ್ನು ಅಮಾನತ್ತುಗೊಳಿಸಲಾಗಿದೆ. ಐ.ಪಿ.ಎಸ್ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆ ಪ್ರಾರಂಭಿಸಲು ಕ್ರಮವಹಿಸಲಾಗಿದೆ. |
| **ಇ)** ಕ್ರಿಮಿನಲ್ ಪ್ರಕರಣ ದಾಖಲಾದ ಸರಕಾರಿ ನೌಕರರನ್ನು ಅಮಾನತ್ತು ಮಾಡಿ ಇಲಾಖಾ ವಿಚಾರಣೆಗೆ ಆದೇಶ ನೀಡಲಾಗುವುದೇ; ಈ ಕುರಿತು ಇರುವ ನಿಯಮಗಳೇನು; | ಅಖಿಲ ಭಾರತ ಸೇವೆಗಳು (ಶಿಸ್ತು ಮತ್ತು ಮೇಲ್ಮನವಿ) ನಿಯಮಗಳು, 1969ರನ್ವಯ ಕ್ರಮವಹಿಸಲಾಗುತ್ತದೆ. |
| **ಈ)** ಕ್ರಿಮಿನಲ್ ಮೊಕದ್ದಮೆ ದಾಖಲಾದ ಐ.ಎ.ಎಸ್ ಮತ್ತು ಐ.ಪಿ.ಎಸ್ ಅಧಿಕಾರಿಗಳ ಮೇಲೆ ನ್ಯಾಯಾಲಯದಲ್ಲಿ ಪ್ರಕರಣ ನಡೆಯುತ್ತಿದ್ದರೂ ಯಾವ ನಿಯಮದ ಅನ್ವಯ ಮುಂಬಡ್ತಿ ನೀಡಲಾಗುತ್ತದೆ; | ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಮುಂಬಡ್ತಿ ಮಾರ್ಗಸೂಚಿಗಳಲ್ಲಿ ಕ್ರಿಮಿನಲ್ ಮೊಕದ್ದಮೆ ದಾಖಲಾದ ಐ.ಎ.ಎಸ್ ಮತ್ತು ಐ.ಪಿ.ಎಸ್ ಅಧಿಕಾರಿಗಳಿಗೆ ಮುಂಬಡ್ತಿ ನೀಡಲು ಅವಕಾಶವಿರುವುದಿಲ್ಲ. |

**ಸಂಖ್ಯೆ:**ಇ-ಸಿಆಸುಇ 606 ಸೆಅಸೆ 2020

(ಬಿ.ಎಸ್. ಯಡಿಯೂರಪ್ಪ)
ಮುಖ್ಯ ಮಂತ್ರಿ